ಮೈಸೂರ ಗೆಜಿಟ್.

ನಂ. 42.] ಸರ್ಕಾರದಿಂದ ಫಾಯಿಷ್ ಆದ್ದು [ನಂ. 7.

ಬೆಂಗಳೂರು, ಗುರುವಾರ, ಫೆಬ್ರವರಿ ತಾ|| 14, ಸ್ರ 1907.

ಭಾಗಗಳನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಬೇರೆ ಬೇರೆಯಾಗಿ ಪುಟಸಂಖೆ ಕೊಡಲ್ಪಡುತ್ತೆ.

ವಿಷಯ ಸೂಚಿಕೆ.

1ನೆ ಭಾಗ–ಮೈಸೂರು ಸೀಮೆಯ ಶ್ರೀಮರ್ ಮಹಾರಾಜಾ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

2ನೆ ಭಾಗ–ರೆಸಿಡೆಂಟರು, ಜೀಫ್ ಜಡ್ಜಿಯವರು, ಸರ್ವೆ ವ ಇನಾಂ ಸೂಪರ್ಡಿಟೆಂಡೆಂಟರು, ರೆವಿನ್ಯೂ ಕಮ್ಮಿಷನರವರು, ಈ ಟ್ರೋಲರವರು, ಪಬ್ಲಿಕ್ ವರ್ಕ್ಸ್ ಆಫಿಸರ್‌ಗಳು, ಫಾರೆಸ್ಟ್ಟು, ರೆಜಿಸ್ಟ್ರೇರ್ಸ ವ ಎಡ್ಯುಕೇರ್ಸ ಇನ್ಸ್‌ಪೆಕ್ಟರ್ ಜನರಲ್ಲವರು, ಮ್ಯುನಿಸಿಪಲ್‌ಟೋರ್ಡು ಪ್ರಸಿಡೆಂಟರು ಡಿಸ್ಟ್ರಿಕ್ಟು ವ ಸೆಷನ್ ಜಡ್ಜಿರು, ಡಿಸ್ಟ್ರಿಕ್ಟು ಡೆಪ್ಯುಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜಿರು, ಪೋಲೀಸ್ ಸೂಪರ್ಡಿಟೆಂಡೆಂಟರು, ಫಾರೆಸ್ಟ್ಟು ಆಫಿಸರ್‌ಗಳು ಇವರುಗಳಿಂದ ಕೊಡೋಣಾದ ಇಸ್ತಿಹಾರ್‌ಗಳು ವಗ್ಗೈರೆ ಕಾಲಸ್ಥಿತೀ ರಿಪೋರ್ಟುಗಳು; ಪೋಸ್ಟ್ಆಫೀಸ್ ನೋಟಿಸ್‌ಗಳು.

3ನೆ ಭಾಗ–ಲೆಜಿಸ್‌ಲೇಟಿವ್ ರೆಗ್ಯುಲೇರ್ಷ್‌ಗಳು ಮತ್ತು ಅವುಗಳಂತೆ ಆದ ನಿಬಂಧನೆಗಳು—ಇಲ್ಲಾ.

4ನೆ ಭಾಗ–ಸರ್ಕಾರೀ ಕಾಗದ ಪತ್ರಗಳು.

I.ನೆ ಭಾಗ.

ಮೈಸೂರು ಸೀಮೆಯ ಶ್ರೀಮರ್ ಮಹಾರಾಜಾ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

ಜನರಲ್ ಮತ್ತು ರೆವಿನ್ಯೂ.

ತಾರೀಖು 30ನೆ ಜನವರಿ 1907.

ನಂ. 6762—ಸ್ಯಾನಿಟರಿ 57–06–8, ಚಿತ್ರದುರ್ಗ ಡಿಸ್ಟ್ರಿಕ್ಟು ಚಳ್ಳಕೆರೆ, ತಾಲ್ಲೂಕಿನ ನಾಯಕನಹಟ್ಟಿ ಗ್ರಾಮಕ್ಕೆ ತಿಪ್ಪೇರುದ್ರನ ಜಾತ್ರೆ ಕಾಲದಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶಕೊಟ್ಟರೆ ಅಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮರ್ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ —

1897ನೆಯ ವರ್ಷದ 2ನೆಯ ನಂಬರ್ ಎಪಿಡಿಮಿಕ್ ಡಿಸೀಸೆಸ್ ರೆಗ್ಯುಲೇಷನ್ಸ್ ಎಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಮೈಸೂರು ಶ್ರೀಮರ್ ಮಹಾರಾಜರವರ ಸರ್ಕಾರದವರು 1907ನೆಯ ವರ್ಷದ ಮಾರ್ಚಿ 1ನೆ ತಾರೀಖಿನಿಂದ 1907ನೆ ಇಸವಿ ಮಾರ್ಚಿ 13ನೆ ತಾರೀಖಿನ ವರೆಗೆ (ಉಭಯ ದಿನಗಳೂ ಸೇರಿ) ಪ್ಲೇಗು ತಗುಲಿರುವ ಸ್ಥಳೀಕಗಳಿಂದ ಜನರು ಅಲ್ಲಿಗೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್‌ನಾಮೆಗೆ ವಿರೋಧವಾಗಿ ಮೈಲ್ಲಂಡ ಜಾತ್ರೆಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.